## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** | 158 (228) |
| ಸದಸ್ಯರ ಹೆಸರು: | ಶ್ರೀ ಸಿ.ಎನ್.ಮಂಜೇಗೌಡ |
| ಉತ್ತರಿಸಬೇಕಾದ ದಿನಾಂಕ: | 10.12.2024 |
| ಉತ್ತರಿಸುವವರು: | ಪೌರಾಡಳಿತ ಮತ್ತು ಹಜ್ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪೌರಕಾರ್ಮಿಕರುಗಳಿಗೆ ನಿಗದಿ ಪಡಿಸಿದ ಕೆಲಸಗಳನ್ನು ಹೊರತುಪಡಿಸಿ ಅವರುಗಳನ್ನು ಅನ್ಯ ಕೆಲಸಗಳಿಗೆ ಬಳಕೆ ಮಾಡಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು,<br>ಪೌರಕಾರ್ಮಿಕರುಗಳಿಗೆ ನಿಗದಿ ಪಡಿಸಿದ ಕೆಲಸಗಳನ್ನು ಹೊರತುಪಡಿಸಿ ಅವರುಗಳನ್ನು ಅನ್ಯ ಕೆಲಸಗಳಿಗೆ ಬಳಕೆ ಮಾಡಿಕೊಳ್ಳುತ್ತಿರುವ ಬಗ್ಗೆ ಕರ್ನಾಟಕ ರಾಜ್ಯ ಪೌರಸೇವಾ ನೌಕರರ ಸೇವಾ ಸಂಘ (ರಿ) ಕೊಪ್ಪಳ ಜಿಲ್ಲೆ ಹಾಗೂ ಸಾರ್ವಜನಿಕರ ಮನವಿ ದಾವಣಗೆರೆ ಜಿಲ್ಲೆ ಮತ್ತು ಪೌರಕಾರ್ಮಿಕರು ಕೋಲಾರ ನಗರಸಭೆ, ಕೋಲಾರ ಜಿಲ್ಲೆ ಇವರುಗಳಿಂದ ದೂರು ಮನವಿಗಳು ಸ್ವೀಕೃತವಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ಈ ಸಂಬಂಧ ಎಲ್ಲೆಲ್ಲಿ ದೂರುಗಳು ದಾಖಲಾಗಿವೆ; | ಈ ಸಂಬಂಧ ರಾಜ್ಯದ ನಗರಸಭೆ / ಪುರಸಭೆ / ಪಟ್ಟಣ ಪಂಚಾಯಿತಿಗಳಲ್ಲಿ, ಪೌರಕಾರ್ಮಿಕರುಗಳನ್ನು ಸ್ವಚ್ಛತಾ ಕಾರ್ಯಕ್ಕೆ ಹೊರತುಪಡಿಸಿ, ಇತರೆ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಸೂಚಿಸದಿರುವಂತೆ ಹಾಗೂ ಕಛೇರಿಗಳಲ್ಲಿ ಕಾರ್ಯನಿರ್ವಹಿಸಲು ಕಟ್ಟುನಿಟ್ಟಾಗಿ ನಿಯೋಜನೆ ಮಾಡದಂತೆ ರಾಜ್ಯದ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಜಿಲ್ಲಾ ವ್ಯಾಪ್ತಿಯ ನಗರ ಸ್ಥಳೀಯ ಸಂಸ್ಥೆಯ ಪೌರಾಯುಕ್ತರು / ಮುಖ್ಯಾಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ಪೌರಾಡಳಿತ ನಿರ್ದೇಶಕರಿಂದ ದಿನಾಂಕ: 06.12.2021 ಮತ್ತು 19.05.2023 ರ ಪತ್ರಗಳ ರೀತ್ಯಾ ರಾಜ್ಯದ ಎಲ್ಲಾ ಯೋಜನಾ ನಿರ್ದೇಶಕರಿಗೆ ನಿರ್ದೇಶನ ನೀಡಲಾಗಿರುತ್ತದೆ.<br><br>ಅದಲ್ಲದೇ, ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ: 567556/DMA/EST2/DGPR/43/2021, ದಿನಾಂಕ: 19.01.2024ರ ರೀತ್ಯಾ ಪೌರಕಾರ್ಮಿಕರಿಗೆ ನಿಗಧಿಪಡಿಸಿದ ಕರ್ತವ್ಯಗಳನ್ನು ಹೊರತುಪಡಿಸಿ ಇತರೇ ಅನ್ಯ ಕೆಲಸಕಾರ್ಯಗಳಿಗೆ ನಿಯೋಜಿಸುವುದು ಕಂಡು ಬಂದಲ್ಲಿ ಅಥವಾ ನಿರ್ದೇಶನಾಲಯಕ್ಕೆ ದೂರು ಸ್ವೀಕೃತವಾದಲ್ಲಿ, ಅನ್ಯ ಕಾರ್ಯಗಳಿಗೆ ನಿಯೋಜಿಸಿದ ಅಧಿಕಾರಿ / ಸಿಬ್ಬಂದಿಯನ್ನು ಮತ್ತು ಅವರ ಸೇವೆಯನ್ನು ಪಡೆಯುವವರ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು, ಮಹಾನಗರಪಾಲಿಕೆ ಆಯುಕ್ತರು, ಯೋಜನಾ ನಿರ್ದೇಶಕರುಗಳು ಹಾಗೂ ಪೌರಾಯುಕ್ತರು ಮತ್ತು ಮುಖ್ಯಾಧಿಕಾರಿಗಳಿಗೆ ಆದೇಶಿಸಲಾಗಿರುತ್ತದೆ. |
| ಇ) | ಕಾರ್ಮಿಕರ ಅಸಹಾಯಕತೆಯನ್ನು ದುರುಪಯೋಗಪಡಿಸಿ ಕೊಳ್ಳದಿರುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು? | |

ಸಂಖ್ಯೆ: ನಅಇ 236 ಜಿಇಎಲ್ 2024 (ಇ)

(ರಹೀಂಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು